**All India Radio: Bangalore**
**Regional Bulletin In Kannada**
**29.03.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.03.2026 / 2.30 p.m.**
**<><><><>**

ಮುಖ್ಯಾಂಶಗಳು

1. ವದಂತಿಗಳಿಗೆ ಕಿವಿಕೊಡದೇ ಸರ್ಕಾರ ಒದಗಿಸುವ ಮಾಹಿತಿ ನಂಬಲು ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಕರೆ
2. ಬೆಂಗಳೂರಿನ ಪ್ರಯೋಗ್ ಶಿಕ್ಷಣ ಸಂಶೋಧನಾ ಸಂಸ್ಥೆಯ ಅನ್ವೇಷಣ್ ಉಪಕ್ರಮದ ಬಗ್ಗೆ ಪ್ರಧಾನಿ ಪ್ರಶಂಸೆ
3. ಬೆಳಗಾವಿಯ ಶಿವಲಿಂಗ ಸಾತಪ್ಪ ಹುದ್ದಾರ್ ಅವರ ಆಧುನಿಕ ಕೆರೆ ಮೀನುಗಾರಿಕಾ ಕೃಷಿ ಕುರಿತು ಪ್ರಧಾನಿ ಶ್ಲಾಘನೆ
4. ನ್ಯಾಯ ವಿತರಣೆಯಲ್ಲಿ ರಾಜಿಯಾಗದಿರಲು ಪೊಲೀಸರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ; ಕರ್ನಾಟಕ ಪೊಲೀಸ್ ಅಕಾಡೆಮಿ ಸಿಬ್ಬಂದಿಗೆ ೨ ಲಕ್ಷ ರೂಪಾಯಿ ಬಹುಮಾನ ಘೋಷಣೆ

<><><><>

ಪ್ರಸಕ್ತ ಭೀಕರ ಯುದ್ಧ ಮತ್ತು ಸಂಘರ್ಷದ ಪರಿಸ್ಥಿತಿಯಿಂದಾಗಿ ಜಾಗತಿಕವಾಗಿ ಇಂಧನ ಬಿಕ್ಕಟ್ಟು ಎದುರಾಗಿದ್ದರೂ, ಭಾರತವು ತನ್ನ ರಾಜತಾಂತ್ರಿಕ ಸಂಬಂಧಗಳು ಮತ್ತು ಕಳೆದ ದಶಕದಲ್ಲಿ ನಿರ್ಮಿಸಿರುವ ರಾಷ್ಟ್ರೀಯ ಸಾಮರ್ಥ್ಯದಿಂದ ಈ ಸವಾಲನ್ನು ಧೈರ್ಯವಾಗಿ ಎದುರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್‌ನ ೧೩೨ನೇ ಆವೃತ್ತಿಯ ಮೂಲಕ ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಗಲ್ಫ್ ರಾಷ್ಟ್ರಗಳಲ್ಲಿ ವಾಸಿಸುತ್ತಿರುವ ಹತ್ತು ದಶಲಕ್ಷಕ್ಕೂ ಹೆಚ್ಚು ಭಾರತೀಯರಿಗೆ ಅಲ್ಲಿನ ಸರ್ಕಾರಗಳು ನೀಡುತ್ತಿರುವ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿದರು. ಇದೇ ವೇಳೆ, ಇಂತಹ ಬಿಕ್ಕಟ್ಟಿನ ಸಮಯದಲ್ಲಿ ದೇಶದ ಹಿತದೃಷ್ಟಿಯಿಂದ ಯಾರೂ ಈ ವಿಷಯಗಳನ್ನು ರಾಜಕೀಯಗೊಳಿಸಬಾರದು ಮತ್ತು ವದಂತಿಗಳಿಗೆ ಕಿವಿಗೊಡಬಾರದು ಎಂದು ಅವರು ಮನವಿ

ಮಾಡಿದರು.  ಹುಬ್ಬಳ್ಳಿಯಲ್ಲಿ ಇತ್ತೀಚೆಗೆ ನಡೆದ ರಣಜಿ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯ ರೋಮಾಂಚಕ ಕ್ಷಣಗಳನ್ನು ಸ್ಮರಿಸಿದ ಪ್ರಧಾನಿ, ಸುಮಾರು ಏಳು ದಶಕಗಳ ಸುದೀರ್ಘ ಕಾಯುವಿಕೆಯ ನಂತರ ಜಮ್ಮು-ಕಾಶ್ಮೀರ ತಂಡವು ಹುಬ್ಬಳ್ಳಿಯ ಮೈದಾನದಲ್ಲಿ ಜಯಗಳಿಸುವ ಮೂಲಕ ತನ್ನ ಚೊಚ್ಚಲ ರಣಜಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿರುವುದು ಕ್ರೀಡಾ ಇತಿಹಾಸದ ಮಹತ್ವದ ಮೈಲಿಗಲ್ಲು ಎಂದು ಹರ್ಷ ವ್ಯಕ್ತಪಡಿಸಿದರು. ಬೆಂಗಳೂರಿನಲ್ಲಿ ನಡೆಯುತ್ತಿರುವ ಒಂದು ವಿಶಿಷ್ಟ ಶೈಕ್ಷಣಿಕ ಉಪಕ್ರಮದ ಬಗ್ಗೆ ಮಾತನಾಡಿದ ಪ್ರಧಾನಿ, ಇಲ್ಲಿನ 'ಪ್ರಯೋಗ್ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಶನ್ ರಿಸರ್ಚ್' ಸಂಸ್ಥೆಯ ಕಾರ್ಯವೈಖರಿಯನ್ನು ಶ್ಲಾಘಿಸಿದರು. ಶಾಲಾ ಮಟ್ಟದಲ್ಲಿ ವಿಜ್ಞಾನ ಶಿಕ್ಷಣವನ್ನು ಜನಪ್ರಿಯಗೊಳಿಸುವ ಉದ್ದೇಶ ಹೊಂದಿರುವ ಈ ತಂಡವು, 'ಅನ್ವೇಷಣ್' ಎಂಬ ಪ್ರಯೋಗದ ಮೂಲಕ ೯ ರಿಂದ ೧೨ನೇ ತರಗತಿಯ ವಿದ್ಯಾರ್ಥಿಗಳಿಗೆ ರಸಾಯನಶಾಸ್ತ್ರ ಮತ್ತು ಭೂ ವಿಜ್ಞಾನದಂತಹ ಕ್ಷೇತ್ರಗಳಲ್ಲಿ ಪ್ರಾಯೋಗಿಕ ಸಂಶೋಧನೆ ನಡೆಸಲು ವೇದಿಕೆ ಕಲ್ಪಿಸುತ್ತಿದೆ. ವಿಜ್ಞಾನದ ಬಗ್ಗೆ ಭಯ ಹೊಂದಿರುವ ವಿದ್ಯಾರ್ಥಿಗಳಿಗೆ ಇಂತಹ ಪ್ರಾಯೋಗಿಕ ಕಲಿಕೆಯು ಕುತೂಹಲ ಮೂಡಿಸುತ್ತದೆ ಮತ್ತು ಭವಿಷ್ಯದ ವಿಜ್ಞಾನಿಗಳನ್ನು ರೂಪಿಸಲು ಸಹಕಾರಿಯಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (೩೫ ಸೆಕೆಂಡ್‌ಗಳು)**

ಕೃಷಿ ಮತ್ತು ಮೀನುಗಾರಿಕೆ ಕ್ಷೇತ್ರದಲ್ಲೂ ಆಧುನಿಕ ವಿಧಾನಗಳನ್ನು ಅಳವಡಿಸಿಕೊಳ್ಳುತ್ತಿರುವ ಕೃಷಿಕರ ಸಾಧನೆಯನ್ನು ಉಲ್ಲೇಖಿಸಿದ ಪ್ರಧಾನಿ, ಬೆಳಗಾವಿ ತಾಲೂಕಿನ ಬೋಡ ಕ್ಯಾನಟ್ಟಿ ಗ್ರಾಮದ ನಿವಾಸಿ ಶಿವಲಿಂಗ ಸಾತಪ್ಪ ಹುದ್ದಾರ್ ಅವರ ಯಶೋಗಾಥೆಯನ್ನು ಹಂಚಿಕೊಂಡರು. ಸಾಂಪ್ರದಾಯಿಕ ಕೃಷಿಯಿಂದ ಹೊರಬಂದು ಆಧುನಿಕ ಮೀನುಗಾರಿಕೆಯನ್ನು ಆರಿಸಿಕೊಂಡ ಶಿವಲಿಂಗ ಅವರು, ಕೆರೆ ಮೀನು ಕೃಷಿಯಲ್ಲಿ ತೊಡಗಿ ಯಶಸ್ವಿಯಾಗಿರುವುದನ್ನು ಇತರ ರೈತರಿಗೆ ಸ್ಫೂರ್ತಿಯಾದ ಉದಾಹರಣೆ ಎಂದು ಬಣ್ಣಿಸಿದರು.  ಪ್ರಸ್ತುತ ಮೀನು ಕೃಷಿಯನ್ನು ನೋಡಿಕೊಳ್ಳುತ್ತಿರುವ ಶಿವಲಿಂಗ ಅವರ ಪುತ್ರ ರಾಜುಶಿವಲಿಂಗಪ್ಪ ಹುದ್ದಾರ್ ಆಕಾಶವಾಣಿಗೆ ತಮ್ಮ ಮೀನು ಕೃಷಿಯ ಬಗ್ಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ರಾಜುಶಿವಲಿಂಗಪ್ಪ ಹುದ್ದಾರ್ (೩೭ ಸೆಕೆಂಡ್‌ಗಳು)**

ಇಂದಿನ ಮನ್ ಕಿ ಬಾತ್‌ನಲ್ಲಿ ಪ್ರಧಾನಿ, ಹಸ್ತಪ್ರತಿ ಸಂರಕ್ಷಣೆಗಾಗಿ 'ಜ್ಞಾನ ಭಾರತಂ ಅಪ್ಲಿಕೇಶನ್' ಬಳಕೆಯ ಮಹತ್ವ, 'ಮೈ ಯುವ ಭಾರತ್' ಸಂಘಟನೆಯ ಮೂಲಕ ಯುವಜನರು ಬಜೆಟ್ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುತ್ತಿರುವುದು ಮತ್ತು ಅಂತಾರಾಷ್ಟ್ರೀಯ ಕ್ರೀಡಾ ವೇದಿಕೆಗಳಲ್ಲಿ ಮಿಂಚುತ್ತಿರುವ ಗುರ್ವೀರ್ ಸಿಂಗ್ ಹಾಗೂ ಅನಾಹತ್ ಸಿಂಗ್ ಅವರ ಸಾಧನೆಗಳನ್ನು ಶ್ಲಾಘಿಸಿದರು. ಜಲ ಸಂರಕ್ಷಣೆಗಾಗಿ ತ್ರಿಪುರಾ, ಛತ್ತೀಸ್‌ಗಢ ಮತ್ತು ತೆಲಂಗಾಣದ ಗ್ರಾಮಸ್ಥರು ಮಾಡುತ್ತಿರುವ ಸಮುದಾಯ ಮಟ್ಟದ ಪ್ರಯತ್ನಗಳು ಹಾಗೂ ಸೌರಶಕ್ತಿ ಕ್ರಾಂತಿಯಿಂದ ದೇಶದ ಮೂಲೆ ಮೂಲೆಗಳಲ್ಲಿ ಉಂಟಾಗುತ್ತಿರುವ ಬದಲಾವಣೆಗಳನ್ನು ಉಲ್ಲೇಖಿಸಿದ ಅವರು, ಸಾರ್ವಜನಿಕ ಸಹಭಾಗಿತ್ವದಿಂದ ಮಾತ್ರ ದೊಡ್ಡ ಬದಲಾವಣೆ ಸಾಧ್ಯ ಎಂದು ಕರೆ ನೀಡಿದರು.

<><><>

ನ್ಯಾಯವಿತರಣೆಯಲ್ಲಿ ಪೊಲೀಸರು ಯಾವುದೇ ಕಾರಣಕ್ಕೂ ರಾಜಿಯಾಗಬಾರದು ಹಾಗೂ ರಾಜ್ಯವನ್ನು ಮಾದಕವಸ್ತು ಮುಕ್ತಗೊಳಿಸಲು ಕಟಿಬದ್ಧರಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯ ಆವರಣದಲ್ಲಿ ಇಂದು ನಡೆದ ೪೬ನೇ ತಂಡದ ಸಿವಿಲ್ ಪೊಲೀಸ್ ಉಪ ನಿರೀಕ್ಷಕರ ನಿರ್ಗಮನ ಪಥ ಸಂಚಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಇದಕ್ಕೂ ಮುನ್ನ ತರಬೇತಿ ಪೂರೈಸಿದ ೨೭೭ ಹೊಸ ಸಬ್ ಇನ್ಸ್ಪೆಕ್ಟರ್‌ಗಳು ಅಧಿಕೃತವಾಗಿ ಸೇವೆಗೆ ಸೇರ್ಪಡೆಗೊಂಡರು. ಪ್ರಶಿಕ್ಷಣಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ, ಕಳೆದ ಮೂರು ವರ್ಷಗಳಲ್ಲಿ ಖಾಲಿ ಇದ್ದ ೪ ಸಾವಿರದ ೧೧ ಪಿಎಸ್‌ಐ ಹುದ್ದೆಗಳನ್ನು ಯಶಸ್ವಿಯಾಗಿ ಭರ್ತಿ ಮಾಡಲಾಗಿದೆ. ಈ ವರ್ಷದ ಬಜೆಟ್‌ನಲ್ಲಿ ಘೋಷಿಸಿದಂತೆ ಇನ್ನುಳಿದ ೮ ಸಾವಿರ ಹುದ್ದೆಗಳನ್ನು ಶೀಘ್ರವೇ ಭರ್ತಿ ಮಾಡಲಾಗುವುದು. ಕರ್ತವ್ಯದ ಅವಧಿಯಲ್ಲಿ ಪೊಲೀಸರು ತಮ್ಮ ಕುಟುಂಬದ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ, ಸರ್ಕಾರ ನಿಮ್ಮ ರಕ್ಷಣೆಗೆ ಸದಾ ಸಿದ್ಧವಿದೆ ಎಂದು ಭರವಸೆ ನೀಡಿದರು. ಮಾದಕ ವಸ್ತು ಮುಕ್ತ ರಾಜ್ಯ ನಿರ್ಮಾಣ ಮಾಡುವುದು ಸರ್ಕಾರದ ಸಂಕಲ್ಪವಾಗಿದ್ದು, ಸಮಾಜದ ಸ್ವಾಸ್ಥ್ಯ ಕಾಪಾಡಲು ಈ ನಿಟ್ಟಿನಲ್ಲಿ ಪೊಲೀಸರು ನಿಷ್ಠುರವಾಗಿ ಕೆಲಸ ಮಾಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಇದೇ ವೇಳೆ ಅತ್ಯುತ್ತಮ ತರಬೇತಿ ನೀಡಿದ ಕರ್ನಾಟಕ ಪೊಲೀಸ್ ಅಕಾಡೆಮಿಯ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿದ ಮುಖ್ಯಮಂತ್ರಿ, ಅವರಿಗೆ ಎರಡು ಲಕ್ಷ

ರೂಪಾಯಿಗಳ ನಗದು ಬಹುಮಾನವನ್ನು ಘೋಷಿಸಿದರು. ಕಾರ್ಯಕ್ರಮದಲ್ಲಿ ಗೃಹಸಚಿವ ಡಾ.ಜಿ.ಪರಮೇಶ್ವರ್, ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕ ತನ್ವಿರ್ ಸೇಠ್ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಪ್ರಶಿಕ್ಷಣಾರ್ಥಿಗಳ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

<><><>

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ೨೦೨೩, ೨೦೨೪ ಹಾಗೂ ೨೦೨೫ನೇ ಸಾಲಿನ ಸಂಯಮ ಪ್ರಶಸ್ತಿ ಪ್ರದಾನ ಸಮಾರಂಭ, ಇದೇ ೩೧ರಂದು ಬೆಂಗಳೂರಿನ ಗಾಂಧೀ ಭವನದಲ್ಲಿರುವ ಮಹಾದೇವ ದೇಸಾಯಿ ಸಭಾಂಗಣದಲ್ಲಿ ನಡೆಯಲಿದೆ. ಸಂಯಮ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸೇರಿದಂತೆ ಹಲವು ಸಚಿವರು ಭಾಗವಹಿಸಲಿದ್ದಾರೆ. ೨೦೨೩ನೇ ಸಾಲಿಗೆ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ್, ೨೦೨೪ನೇ ಸಾಲಿಗೆ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್, ೨೦೨೫ನೇ ಸಾಲಿಗೆ ಕರ್ನಾಟಕ ಗಾಂಧೀ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ. ವೂಡೇ ಪಿ. ಕೃಷ್ಣ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಸಂಯಮ ಅಧ್ಯಕ್ಷ ಶರಣಪ್ಪ ಸಲಾದಪುರ ತಿಳಿಸಿದ್ದಾರೆ.

<><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ  ಉಪಚುನಾವಣೆಯ ಹಿನ್ನೆಲೆಯಲ್ಲಿ, ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಏಪ್ರಿಲ್ ೧ ಮತ್ತು ೨ರಂದು ಅಧಿಕಾರಿಗಳ ತಂಡ ಮತದಾರರ ಮನೆಗೆ ಭೇಟಿ ನೀಡಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಚುನಾವಣಾ ಆಯೋಗದ ನಿರ್ದೇಶನದಂತೆ ೮೫ ವರ್ಷ ಮೇಲ್ಪಟ್ಟವರು ಹಾಗೂ ಶೇ ೪೦ಕ್ಕಿಂತ ಹೆಚ್ಚು ದೈಹಿಕ ಅಶಕ್ತತೆ ಹೊಂದಿರುವ ವಿಶೇಷ ಚೇತನ ಮತದಾರರಿಗೆ ಈ ಸೌಲಭ್ಯ ನೀಡಲಾಗಿದೆ. ಈಗಾಗಲೇ ಅಂಚೆ ಮತಪತ್ರದ  ಮೂಲಕ ಮತ ಚಲಾಯಿಸಲು ಇಚ್ಛಿಸಿ ಅರ್ಜಿ ಸಲ್ಲಿಸಿರುವ ಅರ್ಹ ಮತದಾರರ ಮನೆಗೆ ನಿಗದಿಪಡಿಸಿದ ದಿನದಂದು ಚುನಾವಣಾ ಸಿಬ್ಬಂದಿ ತೆರಳಲಿದ್ದಾರೆ. ಬೆಳಿಗ್ಗೆ

೭ರಿಂದ ಸಂಜೆ ೬ ಗಂಟೆಯವರೆಗೆ. ಅರ್ಜಿ ಸಲ್ಲಿಸಿರುವ ಮತದಾರರು ನಿಗದಿತ ದಿನದಂದು ತಮ್ಮ ಮನೆಯಲ್ಲಿಯೇ ಲಭ್ಯವಿರಬೇಕು ಎಂದು ಅವರು ತಿಳಿಸಿದ್ದಾರೆ.

<><><><>

ಕೊಪ್ಪಳ ಜಿಲ್ಲಾ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ಸುಖದೇವ , ರಾಜಗುರು ಅವರ ಬಲಿದಾನ ದಿವಸದ ಅಂಗವಾಗಿ "ಬಲಿದಾನ ಸ್ಮರಣೆ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ವೈದ್ಯ ಡಾ.ಮಹೇಸ ಗೋವನಕೊಪ್ಪ ಚಾಲನೆ ನೀಡಿದರು. ಬಲಿದಾನಗೈದ ಮಹನಿಯರ ತ್ಯಾಗದ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಕೊಪ್ಪಳ ನಗರದಲ್ಲಿನ ಸಿಂಪಿ ಲಿಂಗಣ್ಣ ವೃತ್ತದಲ್ಲಿ ಪಂಜಿನ ಮೆರವಣಿಗೆ ಆಯೋಜಿಸಲಾಗಿತ್ತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>